**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಯವರ ನ್ಯಾಯಾಲಯ, ಪೊನ್ನಂಪೇಟೆ.**

**ಸಿ ಸಿ ನಂ.554 /2021 .**

ದಿನಾಂಕ : 19 ನೇ ನವೆಂಬರ್ 2022 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ:- ಪಿರ್ಯಾದಿ ಪರ ಶ್ರೀ ಎಂ ಎಸ್ ಕೆ ವಕೀಲರಿಂದ : -

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಹಿ ಮಾಡಿ ಸಲ್ಲಿಸಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿರುತ್ತದೆ. ಈ ಕೇಸಿಗೆ ಸಂಬಂಧಪಟ್ಟಂತೆ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ, ಸದರಿ ದಾಖಲೆಗಳನ್ನು ಈ ಮುಂದಿನಂತೆ ಗುರುತಿಸಲಾಗಿರುತ್ತದೆ.

ಆರೋಪಿ ನೀಡಿದ ದಿನಾಂಕ 09.04.2021 ರ ಚೆಕ್ ಅನ್ನು ನಿ ಪಿ 1 ಎಂದು ಗುರುತಿಸಲಾಯಿತು ಹಾಗೂ ನಿ ಪಿ 1 ರಲ್ಲಿರುವ ಆರೋಪಿಯ ಸಹಿಯನ್ನು ಸಾಕ್ಷಿಯು ಗುರುತಿಸಿದ ಮೇರೆಗೆ ಆರೋಪಿಯ ಸಹಿಯನ್ನು ನಿ ಪಿ 1 ಎ ಎಂದು ಗುರುತಿಸಲಾಯಿತು. ಬ್ಯಾಂಕಿನವರು ನೀಡಿದ ದಿನಾಂಕ 15.04.2021 ರ ಹಿಂಬರಹವನ್ನು ನಿ ಪಿ 2 ಎಂದು, ದಿನಾಂಕ 28.04.2021 ರ ವಕೀಲರ ಮೂಲಕ ನೀಡಿದ ನೋಟೀಸಿನ ಕಛೇರಿ ಪ್ರತಿಯನ್ನು ನಿ ಪಿ 3 ಎಂದು, ಅಂಚೆ ರಶೀದಿಯನ್ನು ನಿ ಪಿ 4 ಎಂದು, ಅಂಚೆ ಸ್ವೀಕೃತಿಯನ್ನು ನಿಪಿ 5 ಎಂದು ಗುರುತಿಸಲಾಯಿತು.

ಪಾಟೀ ಸವಾಲು: ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೇಳಲಾಗಿ ನೀಡಲಾಯಿತು.

ಮರು ವಿಚಾರಣೆ :- ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಗಿರುತ್ತದೆ)
ಓದಿ ಹೇಳಿ ಕೇಳಿಸಿ ಸರಿ ಇದೆ ಎಂದು ಒಪ್ಪಿದೆ.

(ಸಾಕ್ಷಿಯವರ ಸಹಿ)

ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ.,ಪೊನ್ನಂಪೇಟೆ.